ಓ .ಎಸ್ . ನಂ. 225/2012 ಪಿಡಬ್ಲ್ಯೂ: 1

<u>ದಿನಾಂಕ 27.11.2019 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>

<u>ಮುಂದುವರೆದ ಪಾಟೀ ಸವಾಲುಃ- ಶ್ರೀ ಎಸ್.ಆರ್.ಎ. ಪ್ರತಿವಾದಿಗಳ ಪರ ವಕೀಲರಿಂದಃ</u>

ನನ್ನ ತಂದೆ ತಾಯಿಗೆ ಐದು ಜನ ಮಕ್ಕಳಾಗಿದ್ದು ಅದರಲ್ಲಿ 3 ಜನ ಗಂಡು ಮಕ್ಕಳು ಹಾಗೂ ಇಬ್ಬರು ಹೆಣ್ಣು ಮಕ್ಕಳಾಗಿರುತ್ತಾರೆ. ಅಸಲು ದಾವಾ ಸಂಖ್ಯೆ 173/2011 ಪ್ರಕರಣ ಏನಾಗಿರುತ್ತದೆ ಎಂದು ನನಗೆ ಗೊತ್ತಿರುತ್ತದೆ. ಸದರಿ ತೀರ್ಪಿನ ವಿರುದ್ಧ ನಾವು ಯಾವುದೇ ಮೇಲ್ಮನವಿ ಸಲ್ಲಿಸಿರುವುದಿಲ್ಲ. ದಾವಾ ಆಸ್ತಿಗೆ ಸಂಬಂಧಿಸಿದಂತೆ ನನ್ನ ಸೋದರಿಯರಾದ 1 ಮತ್ತು 3 ನೇ ಪ್ರತಿವಾದಿಗಳು ಯಾವುದೇ ನೋಂದಾಯಿತ ದಾಖಲೆಗಳನ್ನು ಬರೆದುಕೊಟ್ಟಿರುವುದಿಲ್ಲ. ಸಾಕ್ಷಿಯು ಮುಂದುವರೆದು ಅದು ನಮ್ಮ ತಂದೆಯ ಕಾಲದಲ್ಲಿಯೇ ನನ್ನ ತಂದೆ-ತಾಯಿಯು ದಾವಾ ಆಸ್ತಿಯು ನನಗೆ ಎಂದು ಹೇಳಿರುತ್ತಾರೆ ಎಂದು ನುಡಿಯುತ್ತಾರೆ. ಸದರಿ ವಿಚಾರವನ್ನು ನನ್ನ ವಾದ ಪತ್ರದಲ್ಲಾಗಲೀ ಅಥವಾ ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಾಗಲೀ ನಮೂದಿಸಿರುವುದಿಲ್ಲ . ವಾದಿಗಳು ಮತ್ತು 1 ಮತ್ತು 3 ನೇ ಪ್ರತಿವಾದಿಗಳ ನಡುವೆ ವಿಭಾಗವಾದ ಬಗ್ಗೆ ಯಾವುದೇ ದಾಖಲೆ ಇರುವುದಿಲ್ಲ.

<u>ಮರು ವಿಚಾರಣೆಃ ಇಲ್ಲ.</u>

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ ಹೇ ಕೇ ಸ ಇದೆ,

(ಸಂತೋಷ ಕೊಠಾರಿ )
ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂ., ಕೊಳ್ಳೇಗಾಲ